ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೫

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ
## (ಮುಂದುವರೆದ ಉಪವೇಶನಗಳು)

**ಮಂಗಳವಾರ, ದಿನಾಂಕ: ೦೬ನೇ ಜೂನ್, ೨೦೧೭**

---

**ಸಮೂಹ – II**

೧. ಇಂಧನ ಸಚಿವರು.
೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.
೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.
೪. ಕೃಷಿ ಸಚಿವರು.
೫. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.
೬. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು.

---

**ಎಸ್.ಸಿ.ಪಿ./ಟಿ.ಎಸ್.ಪಿ. ಅಡಿಯಲ್ಲಿ ನಿಗದಿಪಡಿಸಿದ ಅನುದಾನದ ಬಗ್ಗೆ**

ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)–

೨೧೧ (೨೦೬೯) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಿಂದ ಲೋಕೋಪಯೋಗಿ ಇಲಾಖೆಯಿಂದ ಎಸ್.ಸಿ.ಪಿ./ಟಿ.ಎಸ್.ಪಿ. ಅಡಿಯಲ್ಲಿ ಮಂಜೂರಾದ ಹಣ ಎಷ್ಟು ; ಬಿಡುಗಡೆಯಾದ ಹಣ ಎಷ್ಟು ; ಖರ್ಚು ಮಾಡಲಾದ ಹಣ ಎಷ್ಟು ;

(ಆ) ಈ ಇಲಾಖೆಯಿಂದ ಯಾವ ಯಾವ ಕಾಮಗಾರಿಗಳಿಗೆ ಈ ಹಣವನ್ನು ಬಳಸಲಾಗಿದೆ ; ಫಲಾನುಭವಿಗಳು ಯಾರು ;

(ಇ) ಸದರಿ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಗುತ್ತಿಗೆದಾರರಿಗೆ ನೀಡಲಾಗಿದೆಯೇ ; ನೀಡಿದ್ದಲ್ಲಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಗುತ್ತಿಗೆದಾರರ ಹೆಸರುಗಳನ್ನೊಳಗೊಂಡ ಸಂಪೂರ್ಣ ಮಾಹಿತಿಯನ್ನು ನೀಡುವುದು ?

## ಮೇವು ಸಂಗ್ರಹಣಾ ಕೇಂದ್ರ

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೨೧೨ (೨೧೨೮) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಒಂದು ಹಸುವಿಗೆ ಒದಗಿಸುವ ಮೇವು ಸಾಲುವುದಿಲ್ಲವೆಂದು ರೈತರು ಹೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಅದಕ್ಕೆ ತೆಗೆದುಕೊಂಡ ಕ್ರಮವೇನು ;

(ಇ) ಮೇವು ಸಂಗ್ರಹಣಾ ಕೇಂದ್ರಗಳಲ್ಲಿ ಎಷ್ಟು ಮೇವು ಸಂಗ್ರಹವಿದೆ ; ಅದು ಎಷ್ಟು ದಿನಕ್ಕೆ ಸಾಲುತ್ತದೆ ?

## ಸೋಲಾರ್ ವಿದ್ಯುತ್ ಉತ್ಪಾದನೆ ಯೋಜನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೨೧೩ (೨೧೧೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸೋಲಾರ್‌ನಿಂದ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ಯಾವಾಗಿನಿಂದ ಜಾರಿಗೆ ಬಂದಿದೆ ;

(ಆ) ಸದರಿ ಯೋಜನೆಯಡಿ ಎಷ್ಟು ಜನ ರೈತರಿಗೆ ಜಮೀನಿನಲ್ಲಿ ಸೋಲಾರ್‌ನಿಂದ ವಿದ್ಯುತ್ (೦.೫ ಮೆಗಾವ್ಯಾಟ್‌ನಿಂದ ೧ ಮೆಗಾವ್ಯಾಟ್ ಅಥವಾ ಹೆಚ್ಚಿಗೆ) ಉತ್ಪಾದನೆ ಮಾಡಲು ಪಿ.ಪಿ.ಎ. ನೀಡಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ರೈತರ ಹೆಸರು, ವಿಳಾಸ, ಜಮೀನಿನ ಸರ್ವೆ ನಂಬರುಗಳೊಂದಿಗೆ ವಿವರ ನೀಡುವುದು)

(ಇ) ಪಿ.ಪಿ.ಎ. ಪಡೆದ ಎಷ್ಟು ಜನ ರೈತರು ವಿದ್ಯುತ್ ಉತ್ಪಾದಿಸುತ್ತಿದ್ದಾರೆ ; ಅಥವಾ ಈ ಸಂಬಂಧ ಕಾಮಗಾರಿಗಳು ಯಾವ ಹಂತದಲ್ಲಿವೆ ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಇಂಧನ ಖರೀದಿ ಕರಾರಿನಲ್ಲಿ ಮೂರನೇ ವ್ಯಕ್ತಿಯು ಪಾಲ್ಗೊಳ್ಳಲು ಅವಕಾಶ ಇದೆಯೇ ; ಇಲ್ಲದಿದ್ದರೆ, ಮೂರನೇ ವ್ಯಕ್ತಿಯ ಪಾಲ್ಗೊಳ್ಳುವಿಕೆಗೆ ಸರ್ಕಾರ ಅವಕಾಶ ಕಲ್ಪಿಸಲು ಚಿಂತನೆ ನಡೆಸಿದೆಯೇ ;

(ಉ) ರೈತರು ಈ ಯೋಜನೆಯ ಕಾಮಗಾರಿಗೆ ಹಣವನ್ನು ಯಾವ ಮೂಲಗಳಿಂದ ಹೊಂದಿಸಬೇಕು ; ಇದರ ಸಂಬಂಧ ಸರ್ಕಾರದಿಂದ ದೊರೆಯಬಹುದಾದ ಸವಲತ್ತುಗಳೇನು ?

## ರಾಜ್ಯದ ಜಾನುವಾರುಗಳು ಕಾಲು ಬಾಯಿ ಜ್ವರದಿಂದ ನರಳುತ್ತಿದ್ದು, ಅವುಗಳಿಗೆ ಸೂಕ್ತ ಲಸಿಕೆ ಹಾಕುವಲ್ಲಿ ವಿಳಂಬವಾಗಿರುವ ಮತ್ತು ಅಗತ್ಯ ಸಿಬ್ಬಂದಿ ಕೊರತೆಯ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧೪ (೨೦೩೬+೨೦೮೭) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಈ ವರ್ಷ ಬೀಕರ ಬರಗಾಲದಿಂದ ಜಾನುವಾರುಗಳಿಗೆ (ಎತ್ತು, ಎಮ್ಮೆ ಹಾಗೂ ಹಂದಿಗಳು) ಕಾಲು ಬಾಯಿ ಜ್ವರದಿಂದ ಬಳಲುತ್ತಿರುವುದು ನಿಜವೇ ; ಈ ರೋಗದಿಂದ ರಾಸುಗಳ ಮೇಲಾಗುವ ನ್ಯೂನತೆಗಳೇನು ; ಮೃತಪಟ್ಟ ಜಾನುವಾರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು), ಈ ರೋಗದಿಂದ ಮೃತಪಟ್ಟ ರಾಸುಗಳಿಗೆ ಸರ್ಕಾರದಿಂದ ಎಷ್ಟು ಪರಿಹಾರ ಕೊಡಲಾಗಿದೆ ;

(ಆ) ರೈತರು ರಾಸು ಖರೀದಿಸುವ ಸಮಯದಲ್ಲಿ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳೇನು ;

(ಇ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಕಾಲು ಬಾಯಿ ರೋಗಕ್ಕೆ ತುತ್ತಾಗಿರುವ ಜಾನುವಾರುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು) ಈ ರೋಗದಿಂದ ಜಾನುವಾರುಗಳನ್ನು ರಕ್ಷಿಸಲು ರೈತರು ಅನುಸರಿಸಬೇಕಾದ ಕ್ರಮಗಳೇನು ಹಾಗೂ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಈ ಖಾಯಿಲೆಯನ್ನು ನಿಯಂತ್ರಿಸಲು ಲಸಿಕೆ ನೀಡಬೇಕಾಗಿರುವುದು ನಿಜವೇ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಅಂದಾಜು ಇನ್ನೂ ಎಷ್ಟು ಜಾನುವಾರುಗಳಿಗೆ ಲಸಿಕೆ ನೀಡುವುದು ಬಾಕಿಯಿದೆ ; (ವಿವರ ನೀಡುವುದು) ಲಸಿಕೆಯನ್ನು ಸಮರ್ಪಕವಾಗಿ ಜಾನುವಾರುಗಳಿಗೆ ನೀಡಲು, ಅಗತ್ಯವಿರುವ ಸಿಬ್ಬಂದಿಯ ಕೊರತೆ ಇದೆಯೇ, ಇದ್ದಲ್ಲಿ, ವಿವರ ನೀಡುವುದು ?

## ಲೋಕೋಪಯೋಗಿ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಪ್ರಸ್ತಾವನೆ ಪ್ರಗತಿಯ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೨೧೫ (೨೦೧೬) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಲೋಕೋಪಯೋಗಿ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಪ್ರಸ್ತಾವನೆ ಪ್ರಗತಿಯಲ್ಲಿದೆಯೇ ; ಇದ್ದರೆ, ನಿಯಮಗಳ ತಿದ್ದುಪಡಿ ಪ್ರಕ್ರಿಯೆ ಯಾವಾಗಿನಿಂದ ಪ್ರಾರಂಭವಾಗಿದೆ ;

(ಆ) ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಪ್ರಸ್ತಾವನೆಯನ್ನು ಅಂತಿಮಗೊಳಿಸದಿರಲು ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಕ್ರಮ ವಹಿಸಲಾಗುವುದು ? (ವಿವರ ನೀಡುವುದು)

## ರಾಜ್ಯದಲ್ಲಿ ವಿದ್ಯುತ್ ಜಾಗದಿಂದ ಪ್ರಸರಣ ಮತ್ತು ಹಂಚಿಕೆ ಮಾಡುವಾಗ ಆಗುತ್ತಿರುವ ನಷ್ಟದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೧೬ (೨೮೯೫) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ವಿದ್ಯುತ್ ಜಾಗದಿಂದ ಪ್ರಸರಣ ಮತ್ತು ಹಂಚಿಕೆ ಮಾಡುವಾಗ ಆಗುತ್ತಿರುವ ನಷ್ಟ ಎಷ್ಟು ; (ವಿವರ ನೀಡುವುದು)

(ಆ) ಈ ನಷ್ಟ ರಾಷ್ಟ್ರದ ಮತ್ತು ಅಂತರರಾಷ್ಟ್ರೀಯ ಮಟ್ಟಕ್ಕೆ ಹೋಲಿಸಿದಾಗ ಇರುವ ಪ್ರಮಾಣವೆಷ್ಟು ; (ವಿವರ ನೀಡುವುದು)

(ಇ) ಒಟ್ಟು ನಷ್ಟದ ಎಷ್ಟು ಭಾಗ ಕಳ್ಳತನದಿಂದ ಆಗುತ್ತವೆ ; ಹಾಗೂ ಇದನ್ನು ನಿಯಂತ್ರಿಸಲು ಏನು ಕ್ರಮ ಕೈಗೊಳ್ಳಲಾಗಿದೆ ;

(ಈ) ಕಳಪೆ ಗುಣಮಟ್ಟದ ವಿದ್ಯುತ್ ತಂತಿ, ಟ್ರಾನ್ಸ್‌ಫಾರ್ಮರ್ ಹಾಗೂ ಇತರ ಸಲಕರಣೆಗಳಿಂದಾಗಿ ಆಗುತ್ತಿರುವ ನಷ್ಟವೆಷ್ಟು ; (ವಿವರ ನೀಡುವುದು) ಹಾಗೂ ಈ ಕುರಿತಂತೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ವಿದ್ಯುತ್ ಪೋಲ್ ಮತ್ತು ತಂತಿಗಳ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧೭ (೨೦೩೨) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ೧೯೭೦ರಲ್ಲಿ ಹಾಕಲಾದ ವಿದ್ಯುತ್ ಪೋಲ್ ಮತ್ತು ತಂತಿಗಳು ಇಲ್ಲಿವರೆಗೂ ಬದಲಿಸದೇ ಇರುವುದರಿಂದ ಪೋಲ್ ಮತ್ತು ತಂತಿಗಳು ಶಿಥಿಲಗೊಂಡು, ವಿದ್ಯುತ್ ಹರಿವು ಹೆಚ್ಚಾಗಿ ಅಶಕ್ತ ಕಂಡಕ್ಟರ್‌ಗಳಿಂದ ಟ್ರಾನ್ಸ್‌ಮಿಶನ್ ಲಾಸ್ ಹೆಚ್ಚಾಗಿ ವಿದ್ಯುತ್ ಪೋಲಾಗುತ್ತಿದೆ ; ಹಾಗೂ ರೈತರ ಐಪಿ ಸೆಟ್‌ಗಳಿಗೆ ವಿದ್ಯುತ್ತಿನ ಅಸಮರ್ಪಕ ಹರಿವಿನಿಂದ ಈ ಹಳೆಯ ವಿದ್ಯುತ್ ತಂತಿಗಳು ಹೊಲದಲ್ಲಿ ಮತ್ತು ರಸ್ತೆಗಳಲ್ಲಿ ಹರಿದು ಬಿದ್ದಿರುವುದರಿಂದ ಜಾನುವಾರು ಹಾಗೂ ರೈತರ ಪ್ರಾಣಕ್ಕೆ ಅಪಾಯ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇವುಗಳನ್ನು ಯಾವ ಕಾಲಮಿತಿಯಲ್ಲಿ ಬದಲಾವಣೆ ಮಾಡಲಾಗುವುದು ? (ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧೮ (೨೦೮೬) ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಸ್ಥಳೀಯ ಸಂಸ್ಥೆಗಳ ಸಮಗ್ರ ಅಭಿವೃದ್ಧಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಆ) ಸದರಿ ಅನುದಾನದಲ್ಲಿ ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಅವಕಾಶವಿದೆ ; ಅದಕ್ಕೇನಾದರೂ ಮಾರ್ಗ ಸೂಚಿಗಳಿವೆಯೇ ;

(ಇ) ನಮ್ಮ ರಾಜ್ಯದಲ್ಲಿ ಆಗಿರುವ ಅಭಿವೃದ್ಧಿ ಕಾರ್ಯಗಳಾವುವು ?

## ಮೂಡಿಗೆರೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಾಲಿ ಇರುವ ವಿದ್ಯುತ್ ವಿತರಣಾ ಕೇಂದ್ರಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧೯ (೧೯೦೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೂಡಿಗೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಾಲಿ ಇರುವ ವಿದ್ಯುತ್ ವಿತರಣಾ ಕೇಂದ್ರಗಳೆಷ್ಟು ;

(ಆ) ಮೂಡಿಗೆರೆ ವಿಧಾನಸಭಾ ಕ್ಷೇತ್ರದಲ್ಲಿರುವ ವಿದ್ಯುತ್ ಸಮಸ್ಯೆಯನ್ನು ನಿವಾರಿಸಲು ಯಾವ ಯಾವ ಸ್ಥಳಗಳಲ್ಲಿ ಹೊಸ ವಿದ್ಯುತ್ ವಿತರಣಾ ಕೇಂದ್ರಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ ;

(ಇ) ಮೂಡಿಗೆರೆ ವಿಧಾನಸಭಾ ಕ್ಷೇತ್ರದಲ್ಲಿರುವ ೬೬/೧೧ ಕೆ.ವಿ. ವಿತರಣಾ ಕೇಂದ್ರದಲ್ಲಿ ೬೬/೩೩ ಕೆ.ವಿ. ೮ ಎಂ.ವಿ.ಎ. ಹೆಚ್ಚುವರಿ ಪರಿವರ್ತಕ ಕೇಂದ್ರ, ಜನ್ನಾಪುರದಲ್ಲಿ ೩೩/೧೧ ಕೆ.ವಿ. ಹೊಸ ವಿದ್ಯುತ್ ವಿತರಣಾ ಕೇಂದ್ರ, ಬಣಕಲ್‌ನಲ್ಲಿ ೩೩/೧೧ ಕೆ.ವಿ. ಹೊಸ ವಿದ್ಯುತ್ ವಿತರಣಾ ಕೇಂದ್ರ, ಆಲ್ದೂರಿನಲ್ಲಿ ೬೬/೩೩ ಕೆ.ವಿ. ೮ ಎಂ.ವಿ.ಎ. ಹೆಚ್ಚುವರಿ ಪರಿವರ್ತಕ ಕೇಂದ್ರ ಸದರಿ ಕಾಮಗಾರಿಗಳನ್ನು ಮಂಜೂರು

ಮಾಡಲಾಗಿದೆಯೇ ; ಮಂಜೂರು ಮಾಡಲಾಗಿದ್ದಲ್ಲಿ, ಕಾಮಗಾರಿ ಕೈಗೆತ್ತಿಕೊಳ್ಳದೆ ಇರುವುದಕ್ಕೆ ಕಾರಣವೇನು ?

## ವಿದ್ಯುತ್ ಪರಿವರ್ತಕಗಳನ್ನು ವಿತರಣೆ ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)** –

೨೨೦ (೨೧೨೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುರುವೇಕೆರೆ ಕ್ಷೇತ್ರದ ರೈತರು ವಿದ್ಯುತ್ ಪರಿವರ್ತಕಗಳನ್ನು ಪ್ರತ್ಯೇಕವಾಗಿ ಒದಗಿಸಿಕೊಡುವಂತೆ ಇಂಧನ ಇಲಾಖೆಗೆ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿಳಾಸವಾರು, ಮಾಹಿತಿ ನೀಡುವುದು)

(ಆ) ರೈತರು ಇದುವರೆಗೆ ಈ ಅರ್ಜಿಗಳನ್ನು ಸಲ್ಲಿಸಿ ಎಷ್ಟು ವರ್ಷಗಳು ಕಳೆದಿವೆ; ಇದುವರೆಗೆ ಎಷ್ಟು ವಿದ್ಯುತ್ ಪರಿವರ್ತಕಗಳನ್ನು ವಿತರಣೆ ಮಾಡಲಾಗಿದೆ ;

(ಇ) ಉಳಿದಿರುವ ಅರ್ಜಿಗಳ ಬೇಡಿಕೆಯನ್ನು ಎಷ್ಟು ದಿನಗಳಲ್ಲಿ ಪೂರೈಸಲಾಗುವುದು?

## ಕೊಡಗು ಜಿಲ್ಲೆಯ ಕೃಷಿ ಮಾರುಕಟ್ಟೆ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)** –

೨೨೧ (೨೯೯೧) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿರುವ ಕೃಷಿ ಮಾರುಕಟ್ಟೆ ಕೇಂದ್ರಗಳ ಸಂಖ್ಯೆ ಎಷ್ಟು : (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು : (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕೇಂದ್ರಗಳಿಗೆ ೨೦೧೦–೧೧ ರಿಂದ ಇಲ್ಲಿಯವರೆಗೆ ಅಭಿವೃದ್ಧಿ ಕಾರ್ಯಗಳಿಗಾಗಿ ಬಿಡುಗಡೆಯಾದ, ಖರ್ಚಾದ ಅನುದಾನವೆಷ್ಟು : (ತಾಲ್ಲೂಕುವಾರು, ವರ್ಷವಾರು ಕೇಂದ್ರವಾರು ವಿವರ ನೀಡುವುದು)

(ಈ) ಸದರಿ ಕೇಂದ್ರಗಳಲ್ಲಿ ಸಂಗ್ರಹವಾದ ಶುಲ್ಕ/ರೆವಿನ್ಯೂ ಎಷ್ಟು ? (ಕಳೆದ ೧೦ ವರ್ಷಗಳ ಕೇಂದ್ರವಾರು ಮಾಹಿತಿ ನೀಡುವುದು)

## ಕೃಷಿ ಭಾಗ್ಯ ಯೋಜನೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೨೨ (೧೯೦೭) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಎಷ್ಟು ಜನ ರೈತರು ಇದರ ಪ್ರಯೋಜನೆ ಪಡೆದುಕೊಂಡಿದ್ದಾರೆ : (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಣ್ಣ ಮತ್ತು ಅತಿ ಸಣ್ಣ ರೈತರುಗಳ ಸಂಖ್ಯೆ ಎಷ್ಟು ;

(ಇ) ಇದಕ್ಕಾಗಿ ಎಷ್ಟು ಕೋಟಿ ಹಣ ಖರ್ಚಾಗಿದೆ ?

## ಬೆಳೆ ವಿಮೆ ಯೋಜನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೨೩ (೨೦೨೮) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ರೈತರ ಸಂಖ್ಯೆ ಎಷ್ಟು : (ಸಣ್ಣ, ಅತಿ ಸಣ್ಣ, ದೊಡ್ಡ ರೈತರ ಸಂಖ್ಯೆಯನ್ನು ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿರುವ ರೈತರ ಸಂಖ್ಯೆ ಎಷ್ಟು ; (ಸಣ್ಣ, ಅತಿ ಸಣ್ಣ, ದೊಡ್ಡ ರೈತರ ಸಂಖ್ಯೆಯನ್ನು ತಾಲ್ಲೂಕುವಾರು ನೀಡುವುದು)

(ಇ) ತುಮಕೂರು ಜಿಲ್ಲೆಯಲ್ಲಿ ಬೆಳೆ ವಿಮೆ ಮಾಡಿಸಿದ ರೈತರ ಸಂಖ್ಯೆ ಎಷ್ಟು ; (ತುಮಕೂರು ಜಿಲ್ಲೆಗೆ ಸೇರಿದಂತೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಬರದಿಂದ ಬೆಳೆ ನಷ್ಟವಾಗಿ ಈ ಬೆಳೆ ವಿಮೆ ಯೋಜನೆಯಿಂದ ರೈತರು ಪಡೆದುಕೊಂಡಿರುವ ಬೆಳೆ ಪರಿಹಾರದ ಮೊತ್ತವೆಷ್ಟು ; (ತುಮಕೂರು ಜಿಲ್ಲೆಗೆ ಸೇರಿದಂತೆ ತಾಲ್ಲೂಕುವಾರು ವಿವರ ನೀಡುವುದು)

(ಉ) ತುಮಕೂರು ಜಿಲ್ಲೆಗೆ ಇನ್ನು ಸಂಪೂರ್ಣವಾಗಿ ಬೆಳೆ ವಿಮೆ ಪರಿಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಊ) ಬಾಕಿ ಇರುವ ಬೆಳೆ ವಿಮೆ ಪರಿಹಾರವನ್ನು ಎಷ್ಟು ದಿವಸಗಳಲ್ಲಿ ರೈತರ ಖಾತೆಗೆ ಜಮಾ ಮಾಡಲಾಗುವುದು ಎಂಬ ಬಗ್ಗೆ ಸರ್ಕಾರಕ್ಕೆ ಕಾಲಮಿತಿ ನಿಗಧಿಪಡಿಸಿಕೊಳ್ಳಲು ಇರುವ ತೊಂದರೆಗಳು ಏನು ; (ವಿವರ ನೀಡುವುದು)

(ಋ) ತುಮಕೂರು ಜಿಲ್ಲೆಯಲ್ಲಿ ಬೆಳೆ ವಿಮೆಗಳ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳದಿರುವುದು ಮತ್ತು ಅಲ್ಲಿನ ಅಧಿಕಾರಿಗಳು ಈ ಬಗ್ಗೆ ಉದಾಸೀನತೆ, ತಾತ್ಸರದ ನಿಲುವು, ಈ ಬಗ್ಗೆ ಕೆಲಸ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ;

(ಎ) ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ಬಗ್ಗೆ ಸರ್ಕಾರ ಯಾವ ಕಠಿಣ ಕ್ರಮವನ್ನು ತೆಗೆದುಕೊಂಡಿದೆ ? (ವಿವರ ನೀಡುವುದು)

## ''ಕ್ಲೋಸ್ಡ್ ಟೋಲ್'' ಅನ್ನು ರಾಷ್ಟ್ರೀಯ ಹೆದ್ದಾರಿಯಲ್ಲಿ ಜಾರಿಗೊಳಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೨೪ (೧೯೦೧) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಷ್ಟ್ರೀಯ ಹೆದ್ದಾರಿ ಟೋಲ್‌ಗಳಲ್ಲಿ ಎಷ್ಟು ದೂರ ಪ್ರಯಾಣಿಸುತ್ತೀರೋ ಅಷ್ಟು ದೂರಕ್ಕೆ ಮಾತ್ರ ಕಿ.ಮೀ.ಗೆ ಇಂತಿಷ್ಟು ಎಂಬ ಲೆಕ್ಕದಲ್ಲಿ ಶುಲ್ಕ ಪಾವತಿಸುವ ''ಕ್ಲೋಸ್ಡ್ ಟೋಲ್'' ನೀತಿಯನ್ನು ಕೇಂದ್ರ ಸರ್ಕಾರ ತರಲಿಚ್ಛಿಸಿರುವುದು ನಿಜವೇ;

(ಆ) ಈ ನೀತಿಯನ್ನು ರಾಜ್ಯದಲ್ಲಿಯೂ ಬಳಕೆಗೆ ತರಲಾಗುವುದೇ ; ಇದರಿಂದ ಬಳಕೆದಾರರಿಗೆ ಆಗುವ ಲಾಭವೇನು ;

(ಇ) ಈ ಹೊಸ ನೀತಿಯನ್ನು ಎಂದಿನಿಂದ ಜಾರಿಗೆ ತರಲಾಗುವುದು ;

(ಈ) ಟೋಲ್ ರಸ್ತೆಗಳಲ್ಲಿ ಎಷ್ಟು ಕಿ.ಮೀ. ಪ್ರಯಾಣಿಸಿದ್ದಾರೆ ಎಂಬುದನ್ನು ಯಾವ ರೀತಿಯಾಗಿ ಲೆಕ್ಕಾಚಾರ ಮಾಡಲಾಗುವುದು ?

## ಬಜೆಟ್‌ನಲ್ಲಿ ಘೋಷಿಸಿದಂತೆ ಗ್ರಾಮ ಪಂಚಾಯತ್‌ಗಳ ವಿದ್ಯುತ್ ಬಿಲ್ಲು ಮನ್ನಾ ಮಾಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೨೫ (೨೧೧೨) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರಸಕ್ತ ಸಾಲಿನಲ್ಲಿ ಆಯವ್ಯಯದಲ್ಲಿ ಘೋಷಿಸಿದಂತೆ ಗ್ರಾಮ ಪಂಚಾಯತ್‌ಗಳ ವಿದ್ಯುತ್ ಬಿಲ್ ಮನ್ನಾ ಮಾಡುವ ಕುರಿತು ಆದೇಶ ಹೊರಡಿಸಲಾಗಿದೆಯೇ;

(ಆ) ಇಲ್ಲವಾದಲ್ಲಿ ವಿಳಂಬಕ್ಕೆ ಕಾರಣಗಳೇನು ;

(ಇ) ಪ್ರಸಕ್ತ ಸಾಲಿನವರೆಗೆ ಗ್ರಾಮ ಪಂಚಾಯತ್‌ಗಳಿಂದ ಎಸ್ಕಾಂಗಳಿಗೆ ಪಾವತಿಸಲು ಬಾಕಿ ಇರುವ ವಿದ್ಯುತ್ ಬಿಲ್ಲಿನ ಮೊತ್ತವೆಷ್ಟು ; ಈ ಆರ್ಥಿಕ ವರ್ಷದಲ್ಲಿ ಪಾವತಿಯಾದ ಮೊತ್ತವೆಷ್ಟು ;

(ಈ) ಆಯವ್ಯಯದಲ್ಲಿ ಘೋಷಿಸಿದಂತೆ ಗ್ರಾಮ ಪಂಚಾಯತ್‌ಗಳು ಬಾಕಿ ಇರಿಸಿಕೊಂಡಿರುವ ವಿದ್ಯುತ್ ಬಿಲ್ಲುಗಳನ್ನು ಮನ್ನಾ ಮಾಡುವ ಕುರಿತು ಅಧಿಕೃತ ಆದೇಶವನ್ನು ಯಾವಾಗ ಹೊರಡಿಸಲಾಗುವುದು ;

(ಉ) ವಿದ್ಯುತ್ ಬಿಲ್ಲುಗಳನ್ನು ಮನ್ನಾ ಮಾಡುವ ಕುರಿತು ಶೀಘ್ರವಾಗಿ ಆದೇಶವನ್ನು ಹೊರಡಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; (ಸಂಪೂರ್ಣ ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 149, ಪ್ರತಿಗಳು 1500